ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೦	ಬೆಂಗಳೂರು, ಗುರುವಾರ, ೦೪ ಸೆಪ್ಟೆಂಬರ್, ೨೦೨೫ (ಭಾದ್ರಪದ ೧೩, ಶಕವರ್ಷ ೧೯೪೭)	ಸಂಚಿಕೆ ೧೭೨
Volume - 160	BENGALURU, THURSDAY, 04 SEPTEMBER, 2025 (BHADRAPADA 13, SHAKAVARSHA 1947)	Issue 172

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳಿಗೆ 2025-26ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆ ಮಾಡಿರುವ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. 2025-26ನೇ ಸಾಲಿನ ಆಯವ್ಯಯ ಹಂಚಿಕೆ
2. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2025, ದಿನಾಂಕ:02.04.2025
3. ಸರ್ಕಾರದ ಆದೇಶ ಸಂಖ್ಯೆ: ಸಿಐ 19 ಐಎಫ್1 2025, ದಿನಾಂಕ:22.04.2025
4. ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಪತ್ರ ಸಂಖ್ಯೆ: ಡಿಎಸ್‌ಕೆ/ಇಎಪಿ/13/2024-25, ದಿನಾಂಕ: 01.04.2025

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆಯವ್ಯಯದಲ್ಲಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳ ವೆಚ್ಚಗಳಿಗಾಗಿ 2025-26ನೇ ಸಾಲಿನ ಲೆಕ್ಕಶೀರ್ಷಿಕೆ:2852-08-201-0-09-059ರಲ್ಲಿ ರೂ.200.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ, 2025-26ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆ ಮಾಡಲಾದ ಅನುದಾನದಲ್ಲಿ ಏಪ್ರಿಲ್ 2025 ರಿಂದ ಜೂನ್ 2025 ರವರೆಗಿನ ತ್ರೈಮಾಸಿಕ ಕಂತಿನ ಹಣ ಬಿಡುಗಡೆ ಮಾಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ 2025-26ನೇ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಮಂಜೂರಾತಿಯನ್ನು ನೀಡಲಾಗಿದ್ದು, ಸದರಿ ಆದೇಶದ ಅನುಬಂಧ-5 ರಲ್ಲಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳ ಕಾರ್ಯಕ್ರಮಗಳು ಒಳಗೊಂಡಿರುತ್ತವೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಪತ್ರದಲ್ಲಿ, ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳ ವೆಚ್ಚಗಳಿಗಾಗಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಲು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಕೋರಿರುತ್ತಾರೆ.

ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳ ವೆಚ್ಚಗಳಿಗಾಗಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಐ 130 ಎಸ್‌ಜಿಎಫ್ 2025,
ಬೆಂಗಳೂರು, ದಿನಾಂಕ: 2ನೇ ಜೂನ್ 2025

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2025-26ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ:2852-08-201-0-09-059ರಲ್ಲಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳಿಗೆ ಹಂಚಿಕೆ ಮಾಡಲಾದ ರೂ.200.00 ಲಕ್ಷಗಳ ಮೊತ್ತದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವಾಗಿ ರೂ.50.00 ಲಕ್ಷಗಳನ್ನು (ಐವತ್ತು ಲಕ್ಷಗಳು ಮಾತ್ರ) ಬಿಡುಗಡೆಗೊಳಿಸಿ, ಖಜಾನೆ-2 ರಿಂದ ಸೆಳೆದು ವೆಚ್ಚ ಮಾಡಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

1. 2025-26ನೇ ಸಾಲಿನ ಲೆಕ್ಕಶೀರ್ಷಿಕೆ:2852-08-201-0-09-059ರಡಿ ಬಿಡುಗಡೆ ಮಾಡಲಾದ ಅನುದಾನವನ್ನು ವೆಚ್ಚ ಮಾಡಿರುವ ಕುರಿತು ನಿಗದಿತ ನಮೂನೆಯಲ್ಲಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
2. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2025, ದಿನಾಂಕ:02.04.2025 ರಲ್ಲಿನ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 2025, ದಿನಾಂಕ:02.04.2025 ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರದತ್ತವಾಗಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಾಂತಾರಾಮ)
ಸರ್ಕಾರದ ಅಧೀನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಸಕ್ಕರೆ)

PR-178

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳಿಗೆ 2025-26ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆ ಮಾಡಿರುವ ಅನುದಾನದಲ್ಲಿ ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. 2025-26ನೇ ಸಾಲಿನ ಆಯವ್ಯಯ ಹಂಚಿಕೆ
2. ಸರ್ಕಾರದ ಆದೇಶ ಸಂಖ್ಯೆ: ಸಿಐ 19 ಐಎಫ್1 2025, ದಿನಾಂಕ:22.04.2025
3. ಸರ್ಕಾರದ ಆದೇಶ ಸಂಖ್ಯೆ: ಸಿಐ 130 ಎಸ್‌ಜಿಎಫ್ 2025, ದಿನಾಂಕ: 02.06.2025
4. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2025, ದಿನಾಂಕ:30.06.2025
5. ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಪತ್ರ ಸಂಖ್ಯೆ: ಡಿಎಸ್‌ಕೆ/ಇಎಪಿ/09/2023-24, ದಿನಾಂಕ:13.08.2025

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ 2025-26ನೇ ಸಾಲಿನ ಆಯವ್ಯಯದಲ್ಲಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ

ಸಂಸ್ಥೆಗಳ ವೆಚ್ಚಗಳಿಗಾಗಿ ಲೆಕ್ಕಶೀರ್ಷಿಕೆ: 2852-08-201-0-09-059ರಲ್ಲಿ ರೂ.200.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ 2025-26ನೇ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಮಂಜೂರಾತಿಯನ್ನು ನೀಡಲಾಗಿದ್ದು, ಸದರಿ ಆದೇಶದ ಅನುಬಂಧ-5 ರಲ್ಲಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳ ಕಾರ್ಯಕ್ರಮಗಳು ಒಳಗೊಂಡಿರುತ್ತವೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಆದೇಶದಲ್ಲಿ, 2025-26ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ:2852-08-201-0-09-059ರಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ರೂ.50.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಆದೇಶದಲ್ಲಿ, 2025-26ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆ ಮಾಡಲಾದ ಅನುದಾನದಲ್ಲಿ ಜುಲೈ 2025 ರಿಂದ ಸೆಪ್ಟೆಂಬರ್ 2025 ರವರೆಗಿನ ಎರಡನೇ ತ್ರೈಮಾಸಿಕ ಕಂತಿನ ಹಣ ಬಿಡುಗಡೆ ಮಾಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(5)ರ ಪತ್ರದಲ್ಲಿ, ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳ ವೆಚ್ಚಗಳಿಗಾಗಿ ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಲು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಕೋರಿರುತ್ತಾರೆ.

ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಆಂತರಿಕ ಆರ್ಥಿಕ ಸಲಹೆಗಾರರೊಂದಿಗೆ ಸಮಾಲೋಚಿಸಿ, ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳ ವೆಚ್ಚಗಳಿಗಾಗಿ ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಐ 130 ಎಸ್‌ಜಿಎಫ್ 2025,
ಬೆಂಗಳೂರು, ದಿನಾಂಕ: 26ನೇ ಆಗಸ್ಟ್ 2025

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2025-26ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ:2852-08-201-0-09-059ರಲ್ಲಿ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಮತ್ತು ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಮಂಡ್ಯ ಈ ಸಂಸ್ಥೆಗಳಿಗೆ ಹಂಚಿಕೆ ಮಾಡಲಾದ ರೂ.200.00 ಲಕ್ಷಗಳ ಮೊತ್ತದಲ್ಲಿ ಎರಡನೇ ತ್ರೈಮಾಸಿಕ ಕಂತಿನ ಅನುದಾನವಾಗಿ ರೂ.50.00 ಲಕ್ಷಗಳನ್ನು (ಐವತ್ತು ಲಕ್ಷಗಳು ಮಾತ್ರ) ಬಿಡುಗಡೆಗೊಳಿಸಿ, ಖಜಾನೆ-2 ರಿಂದ ಸೆಳೆದು ವೆಚ್ಚ ಮಾಡಲು ಈ ಕೆಳಕಂಡ ಷರತ್ತುಗಳೊಂದಿಗೆ ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

1. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ(ಆಯವ್ಯಯ ಸೂಚನೆ) ಸಂಖ್ಯೆ: ಆಇ 51(ಟಿ) ವೆಚ್ಚ-1/2025, ದಿನಾಂಕ:09.04.2025 ರನ್ವಯ ಹಾಗೂ 2025-26ನೇ ಸಾಲಿನ ಕ್ರಿಯಾ ಯೋಜನೆಯನುಸಾರ ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಕೆ ಮಾಡುವುದು.
2. ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 34 ಟಿಎಆರ್ 2025, ದಿನಾಂಕ: 27.06.2025 ರಲ್ಲಿ ಸರ್ಕಾರದ ನಿಗಮ/ಮಂಡಳಿ/ಪ್ರಾಧಿಕಾರಗಳು ಮತ್ತು ಸ್ವಾಯತ್ತ ಸಂಸ್ಥೆಗಳ ಬ್ಯಾಂಕ್ ವಹಿವಾಟುಗಳ ಅಂಕಿ-ಅಂಶಗಳನ್ನು ಆಂತರಿಕ ಆರ್ಥಿಕ ಸಲಹೆಗಾರರು ಪ್ರಮಾಣೀಕರಿಸಬೇಕಿರುತ್ತದೆ. ಆದ್ದರಿಂದ ಈ ಸಂಬಂಧ ಕ್ರಮವಹಿಸಲು ಮುಂದಿನ ಅನುದಾನ

ಬಿಡುಗಡೆ ಸಂದರ್ಭದಲ್ಲಿ ಸಂಪೂರ್ಣ ವಿವರವನ್ನು (NTT module ನಲ್ಲಿ ಲಿಂಕ್ ಮಾಡಲಾದ ಬ್ಯಾಂಕ್ ಖಾತೆ ವಿವರ, ಖಾತೆಗಳಲ್ಲಿ ಲಭ್ಯವಿರುವ ಮೊತ್ತ, ಬಳಕೆ ಪ್ರಮಾಣ ಪತ್ರ, ಲೆಕ್ಕ ಸಮನ್ವಯದ ವಿವರ ಮತ್ತು ಇತರೆ ಅಗತ್ಯ ಮಾಹಿತಿ) ಒದಗಿಸುವುದು.

3. ಸಹಾಯಾನುದಾನಕ್ಕೆ ಸಂಬಂಧಿಸಿದಂತೆ ಕರ್ನಾಟಕ ಆರ್ಥಿಕ ಸಂಹಿತೆಯ ಅನುಚ್ಛೇದ-161 ರಲ್ಲಿ ಇಲಾಖಾ ಮುಖ್ಯಾಧಿಕಾರಿಗಳಿಗೆ ನೀಡಲಾದ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

4. 2025-26ನೇ ಸಾಲಿನ ಲೆಕ್ಕಶೀರ್ಷಿಕೆ:2852-08-201-0-09-059ರಡಿ ಬಿಡುಗಡೆ ಮಾಡಲಾದ ಅನುದಾನವನ್ನು ವೆಚ್ಚ ಮಾಡಿರುವ ಕುರಿತು ಕರ್ನಾಟಕ ಆರ್ಥಿಕ ಸಂಹಿತೆಯ ಅನುಚ್ಛೇದ 161(b)(5) ರಡಿಯಲ್ಲಿ ಸೂಚಿಸಿರುವ ನಿಗದಿತ ನಮೂನೆಯಲ್ಲಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

5. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2025, ದಿನಾಂಕ:30.06.2025 ರಲ್ಲಿನ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 02 ಟಿಎಫ್‌ಪಿ 2025, ದಿನಾಂಕ:30.06.2025 ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತವಾಗಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ವಯ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರು ಟಿಪ್ಪಣಿ ಸಂಖ್ಯೆ:ಸಿಐ 62 ಐ.ಎಫ್.1 2025, ದಿನಾಂಕ:19.08.2025 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಾಂತಾರಾಮ)
ಸರ್ಕಾರದ ಅಧೀನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಸಕ್ಕರೆ)

PR-179

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿ ಮೈಸೂರು ಷುಗರ್ ಕಂಪನಿಯು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಕ್ಕೆ ಪಾವತಿಸಬೇಕಾಗಿರುವ ವಿದ್ಯುತ್ ಬಿಲ್ಲಿನ ಬಾಬ್ತು 2ನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ದಿನಾಂಕ:13.12.2024ರಂದು ಜರುಗಿದ ಸಚಿವ ಸಂಪುಟ ಸಭೆಯು ಕಾರ್ಯಸೂಚಿಯಲ್ಲಿನ ಕ್ರಮ ಸಂಖ್ಯೆ (9) ರಲ್ಲಿ {ಸಿ.692/2024} ನೀಡಿರುವ ಅನುಮೋದನೆ.
2. ಸರ್ಕಾರದ ಆದೇಶ ಸಂಖ್ಯೆ: ಸಿಐ 205 ಸಿಓಎಫ್ 2024, ದಿನಾಂಕ:20.05.2025
3. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು ಇವರ ಪತ್ರ ಸಂಖ್ಯೆ: ಸೆಸ್ಕ್/ಕಂದಾಯ/02/E-70698/2025-26/10852, 12955 ದಿನಾಂಕ:11.07.2025, 29.07.2025
4. ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಪತ್ರ ಸಂಖ್ಯೆ:ಡಿಎಸ್‌ಕೆ/ಇಎಪಿ/02/2025-26/780, ದಿನಾಂಕ:22.07.2025
5. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 305 Exp-1/2024, Dated:05.08.2025

******

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಸಚಿವ ಸಂಪುಟ ಸಭೆಯು 'ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ – ಈ ಕಂಪನಿಯು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ

ಮೈಸೂರು – ಈ ನಿಗಮಕ್ಕೆ ಪಾವತಿಸಲು ಬಾಕಿ ಇರುವ ವಿದ್ಯುತ್ ಬಿಲ್ಲಿನ ಅಸಲು ಮೊತ್ತ ರೂ.37,74,95,141.00 ಗಳಲ್ಲಿ ಶೇಕಡಾ 50ರಷ್ಟನ್ನು ಪಾವತಿಸಲು ಹಾಗೂ ಅಸಲಿನ ಮೇಲಿನ ಬಡ್ಡಿಯನ್ನು ಮನ್ನಾ ಮಾಡಲು' ತೀರ್ಮಾನಿಸಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಆದೇಶದಲ್ಲಿ, ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ – ಈ ಕಂಪನಿಯು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಮೈಸೂರು – ಈ ನಿಗಮಕ್ಕೆ ಪಾವತಿಸಲು ಬಾಕಿ ಇರುವ ವಿದ್ಯುತ್ ಬಿಲ್ಲಿನ ಅಸಲು ಮೊತ್ತ ರೂ.37,74,95,141.00 ಗಳಲ್ಲಿ ಶೇಕಡಾ 50ರಷ್ಟನ್ನು ಪಾವತಿಸುವುದಕ್ಕಾಗಿ 2025-26ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ:6860-04-190-2-01-394– ಮೈಸೂರು ಸಕ್ಕರೆ ಕಾರ್ಖಾನೆಗೆ ಸಾಲಗಳು – ರಡಿಯಲ್ಲಿ ಹಂಚಿಕೆ ಮಾಡಿರುವ ರೂ.1888.00 ಲಕ್ಷಗಳ ಮೊತ್ತದಲ್ಲಿ, ಮೊದಲ ಕಂತಿನ ಅನುದಾನವಾಗಿ ರೂ.472.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಪತ್ರಗಳಲ್ಲಿ, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮವು ಬಹಳ ಹಿಂದಿನಿಂದಲೂ ಪಾವತಿಸಲು ಬಾಕಿ ಇದ್ದ ವಿದ್ಯುತ್ ಖರೀದಿ ವೆಚ್ಚ ಮೊತ್ತ ರೂ.286.00 ಕೋಟಿಯನ್ನು 06 ವಾರಗಳಲ್ಲಿ ಪಾವತಿಸಲು Appellate Tribunal For Electricity (APTEL) ಯು ಆದೇಶಿಸಿರುವ ಹಿನ್ನೆಲೆಯಲ್ಲಿ ನಿಗಮವು ಸದರಿ ಮೊತ್ತವನ್ನು ಪಾವತಿಸಿ ನ್ಯಾಯಾಲಯ ನಿಂದನೆಯಿಂದ ಪಾರಾಗಬೇಕಾಗಿರುತ್ತದೆ ಎಂದು, ಈ ಹಿನ್ನಲೆಯಲ್ಲಿ ದಿ ಮೈಸೂರು ಷುಗರ್ ಕಂಪನಿ ಲಿ., ನಿಂದ 03 ಕಂತುಗಳಲ್ಲಿ ಪಾವತಿಸಬೇಕಾಗಿರುವ ಮೊತ್ತ ರೂ.14.16 ಕೋಟಿ ಹಾಗೂ ವಿದ್ಯುತ್ ಖರೀದಿಗೆ ಹೊಂದಾಣಿಕೆ ಮಾಡಲು ಪ್ರಸ್ತಾಪಿಸಿರುವ ಮೊತ್ತ ರೂ.18.87 ಕೋಟಿ ಒಟ್ಟು ರೂ.33.03 ಕೋಟಿಯನ್ನು ಒಂದೇ ಕಂತಿನಲ್ಲಿ ತುರ್ತಾಗಿ ಪಾವತಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂ ರವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರ ಪತ್ರದಲ್ಲಿ, ದಿ ಮೈಸೂರು ಷುಗರ್ ಕಂಪನಿಯಿಂದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮಕ್ಕೆ ಪಾವತಿಸಲು ಬಾಕಿ ಇದ್ದ ಮೊತ್ತ ರೂ.14.16 ಕೋಟಿಗಳು ಹಾಗೂ ವಿದ್ಯುತ್ ಖರೀದಿಗೆ ಹೊಂದಾಣಿಕೆ ಮಾಡಲು ಪ್ರಸ್ತಾಪಿಸಿರುವ ಮೊತ್ತ ರೂ.18.87 ಕೋಟಿಗಳು ಹೀಗೆ ಒಟ್ಟು 33.03 ಕೋಟಿಗಳನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡುವಂತೆ ಕೋರಿರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿ., ರವರ ಮನವಿಯನ್ನು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(5)ರ ಟಿಪ್ಪಣಿಯಲ್ಲಿ 2025-26ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ:6860-04-190-2-01-394–ಮೈಸೂರು ಸಕ್ಕರೆ ಕಾರ್ಖಾನೆಗೆ ಸಾಲಗಳು" ರಡಿಯಲ್ಲಿ ಹಂಚಿಕೆ ಮಾಡಿರುವ ರೂ.1888.00 ಲಕ್ಷಗಳ ಮೊತ್ತದಲ್ಲಿ, ಎರಡನೇ ಕಂತಿನ ಅನುದಾನವಾಗಿ ರೂ.472.00 ಲಕ್ಷಗಳನ್ನು ಬಿಡುಗಡೆಗೊಳಿಸಲು ಆರ್ಥಿಕ ಇಲಾಖೆಯು ಸಹಮತಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಐ 205 ಸಿಓಎಫ್ 2024,
ಬೆಂಗಳೂರು, ದಿನಾಂಕ: 18ನೇ ಆಗಸ್ಟ್ 2025

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ – ಈ ಕಂಪನಿಯು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ

ಮೈಸೂರು – ಈ ನಿಗಮಕ್ಕೆ ಪಾವತಿಸಲು ಬಾಕಿ ಇರುವ ವಿದ್ಯುತ್ ಬಿಲ್ಲನ್ನು ಪಾವತಿಸುವುದಕ್ಕಾಗಿ 2025-26ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ:6860-04-190-2-01-394–ಮೈಸೂರು ಸಕ್ಕರೆ ಕಾರ್ಖಾನೆಗೆ ಸಾಲಗಳು – ರಡಿಯಲ್ಲಿ ಹಂಚಿಕೆ ಮಾಡಿರುವ ರೂ.1888.00 ಲಕ್ಷಗಳ ಮೊತ್ತದಲ್ಲಿ, ಎರಡನೇ ಕಂತಿನ ಅನುದಾನವಾಗಿ ರೂ.472.00 ಲಕ್ಷಗಳನ್ನು ಈ ಕೆಳಕಂಡ ಷರತ್ತುಗೊಳಪಟ್ಟು ಬಿಡುಗಡೆಗೊಳಿಸಿ ಆದೇಶಿಸಿದೆ.

1. ಮೇಲ್ಕಂಡ ರೂ.472.00 ಲಕ್ಷಗಳನ್ನು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಖಜಾನೆ-2 ಲಾಗಿನ್ ಗೆ ಬಿಡುಗಡೆಗೊಳಿಸಲಾಗಿರುತ್ತದೆ. ಸದರಿ ರೂ.472.00 ಲಕ್ಷಗಳನ್ನು {ಲೆಕ್ಕಶೀರ್ಷಿಕೆ:6860-04-190-2-01-394- ಮೈಸೂರು ಸಕ್ಕರೆ ಕಾರ್ಖಾನೆಗೆ ಸಾಲಗಳು} ಮುಂದಿನ ಅಗತ್ಯ ಕ್ರಮಕ್ಕಾಗಿ ಜಂಟಿ ನಿರ್ದೇಶಕರು (ಹೆಚ್.ಆರ್.ಡಿ ಆಡಳಿತ ಮತ್ತು ಇ.ಎಂ), ಜಿಲ್ಲಾ ಕೈಗಾರಿಕಾ ಕೇಂದ್ರ, ಮಂಡ್ಯ ಇವರ ಖಜಾನೆ-2 ರ ಲಾಗಿನ್‌ಗೆ ವರ್ಗಾಯಿಸಲು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ನಿಯಮಾನುಸಾರ ಅಗತ್ಯಕ್ರಮವಹಿಸತಕ್ಕದ್ದು.
2. ಸದರಿ ಆದೇಶದಲ್ಲಿ ಬಿಡುಗಡೆಗೊಳಿಸಿದ ರೂ.472.00 ಲಕ್ಷಗಳ ಮೊತ್ತವನ್ನು ಖಜಾನೆಯಿಂದ ಸೆಳೆಯಲು ಜಂಟಿ ನಿರ್ದೇಶಕರು (ಹೆಚ್.ಆರ್.ಡಿ ಆಡಳಿತ ಮತ್ತು ಇ.ಎಂ), ಜಿಲ್ಲಾ ಕೈಗಾರಿಕಾ ಕೇಂದ್ರ, ಮಂಡ್ಯ ಇವರು ಹಣ ಸೆಳೆಯುವ ಅಧಿಕಾರಿಯಾಗಿರುತ್ತಾರೆ. ಸದರಿಯವರು ಹಣ ಸೆಳೆಯುವ ಬಿಲ್‌ನ್ನು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಮೇಲು ಸಹಿಯೊಂದಿಗೆ ಖಜಾನೆಗೆ ಸಲ್ಲಿಸತಕ್ಕದ್ದು.
3. ಸದರಿ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ದಿ ಮೈಸೂರು ಷುಗರ್ ಕಂಪನಿ ಲಿ., ಸಕ್ಕರೆ ನಗರ, ಮಂಡ್ಯ ಇವರು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಮೈಸೂರು – ಈ ನಿಗಮಕ್ಕೆ ಕೂಡಲೇ ಪಾವತಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು. ಮುಂದುವರಿದು, ಈಗಾಗಲೇ ಕಬ್ಬು ನುರಿಸುವ ಪ್ರಕ್ರಿಯೆ ಆರಂಭವಾಗಿರುವುದರಿಂದ ಉಳಿದ ಮೊತ್ತಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಾಗ, ಸಹ-ವಿದ್ಯುತ್ ಘಟಕದ ಮೂಲಕ ಬಾಕಿ ಇರುವ ಬಿಲ್ಲಿನ ಮೊತ್ತದಲ್ಲಿ ಎಷ್ಟು ಮೊತ್ತವನ್ನು ಪಾವತಿಸಲಾಗಿದೆ ಎಂಬ ಬಗ್ಗೆ ಪುಸ್ತಕ ಹೊಂದಾಣಿಕೆಯ ಮಾಹಿತಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.
4. ಸರ್ಕಾರದ ಆದೇಶ ಸಂಖ್ಯೆ: ಸಿಐ 205 ಸಿಓಎಫ್ 2024, ದಿನಾಂಕ:20.05.2025ರಲ್ಲಿರುವ ಇತರ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: FD 305 Exp-1/2024, Dated: 05.08.2025ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶಾಂತಾರಾಮ)
ಸರ್ಕಾರದ ಅಧೀನ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸಕ್ಕರೆ)

PR-180

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಮನಗರ ಜಿಲ್ಲೆ, ರಾಮನಗರ ತಾಲ್ಲೂಕು, ಕಸಬಾ ಹೋಬಳಿ, ಜಿಗೇನಹಳ್ಳಿ ಗ್ರಾಮದ ಸ.ನಂ 92 ರಲ್ಲಿ 05 ಗುಂಟೆ(ಐದು ಗುಂಟೆ) "ಗೋಮಾಳ" ಜಮೀನನ್ನು ರಾಮನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ಇವರಿಗೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: ಜಿಲ್ಲಾಧಿಕಾರಿ, ರಾಮನಗರ ಜಿಲ್ಲೆರವರ ಕಡತ ಸಂಖ್ಯೆ: E-Comp. No.:1249554 File No.:RAJIKA-LND/LNDR/99/2023

*****

ಪ್ರಸ್ತಾವನೆ:

ಮೇಲೆ ಓದಲಾದ ಕಡತದಲ್ಲಿ ಜಿಲ್ಲಾಧಿಕಾರಿ, ರಾಮನಗರ ಜಿಲ್ಲೆ ಇವರು, ರಾಮನಗರ ಜಿಲ್ಲೆ ರಾಮನಗರ ತಾಲ್ಲೂಕು, ಕಸಬಾ ಹೋಬಳಿ, ಜಿಗೇನಹಳ್ಳಿ ಗ್ರಾಮದ ಸ.ನಂ.92 ರಲ್ಲಿ 0-10 ಗುಂಟೆ "ಗೋಮಾಳ" ಜಮೀನು, ಸ.ನಂ.98 ರಲ್ಲಿ 7-19 ಎಕರೆ/ಗುಂಟೆ "ಹುಲ್ಲುಬನ್ನಿ ಖರಾಬು" ಜಮೀನು ಹಾಗೂ ಸ.ನಂ.138 ರಲ್ಲಿ 6-12 ಎಕರೆ/ಗುಂಟೆ "ಗೋಮಾಳ" ಜಮೀನು ಸೇರಿದಂತೆ ಒಟ್ಟು 14-01 ಎಕರೆ/ಗುಂಟೆ ಜಮೀನು ಲಭ್ಯವಿರುತ್ತದೆ. ಲಭ್ಯವಿರುವ ಜಮೀನಿನ ಪೈಕಿ ಶೇಕಡ 70 ರಷ್ಟು ಜಮೀನು ಬೆಟ್ಟ ಗುಡ್ಡಗಳಿಂದ ಕೂಡಿರುತ್ತದೆ. ಸದರಿ ಗ್ರಾಮದಲ್ಲಿ ಒಟ್ಟು 534 ಜಾನುವಾರುಗಳಿರುತ್ತದೆ; ಶೇಕಡ 50 ರಷ್ಟು ರಾಸುಗಳು ಹೈಬ್ರಿಡ್ ತಳಿಯ ರಾಸುಗಳಾಗಿದ್ದು, ಮೇವಿಗೆ ರೈತರು ಜಮೀನುಗಳಲ್ಲಿಯೇ ಪರ್ಯಾಯ ವ್ಯವಸ್ಥೆ ಮಾಡಿಕೊಂಡಿದ್ದು, ಮೇವಿಗಾಗಿ ಗೋಮಾಳ ಜಮೀನನ್ನು ಅವಲಂಬಿಸಿರುವುದಿಲ್ಲ ಹಾಗೂ ಸದರಿ ಗ್ರಾಮಕ್ಕೆ ಹೊಂದಿಕೊಂಡಂತೆ ಇರುವ ಹಳ್ಳಿಮಾಳ ಗ್ರಾಮದ ಸ.ನಂ.107 ರಲ್ಲಿ 255-00 ಎಕರೆ ಅರಣ್ಯ ಜಮೀನು ಇರುವುದರಿಂದ ರಾಸುಗಳಿಗೆ ಮೇವಿಗಾಗಿ ಯಾವುದೇ ತೊಂದರೆ ಇರುವುದಿಲ್ಲ ಎಂದು ಜಿಲ್ಲಾಧಿಕಾರಿಯವರು ವರದಿ ಮಾಡಿರುತ್ತಾರೆ.

ಮುಂದುವರೆದು, ಜಿಗೇನಹಳ್ಳಿ ಗ್ರಾಮದ ಸ.ನಂ.92 ರಲ್ಲಿ ಆಕಾರ್ ಬಂದ್ ನಂತೆ 36-30 ಎಕರೆ/ಗುಂಟೆ "ಗೋಮಾಳ" ಜಮೀನಿದ್ದು, ಸದರಿ ಜಮೀನನ್ನು ಈ ಕೆಳಕಂಡಂತೆ ಈಗಾಗಲೇ ಮಂಜೂರು ಮಾಡಿದ್ದು, ಅದರಂತೆ ಪಹಣಿಯಲ್ಲಿ ದಾಖಲಾಗಿರುತ್ತದೆ:

ಕ್ರಮ ಸಂಖ್ಯೆ	ಉದ್ದೇಶ	ವಿಸ್ತೀರ್ಣ (ಎಕರೆ/ಗುಂಟೆ)
1	ದರಖಾಸ್ತು ಮೂಲಕ ಕೆಲವು ರೈತರಿಗೆ	23-27
2	ಬಾಲ ಕಾರ್ಮಿಕ ಪುನರ್ ವಸತಿ ಕೇಂದ್ರ ಸ್ಥಾಪನೆಗಾಗಿ	1-20
3	ಕೆಂಪೇಗೌಡನದೊಡ್ಡಿ ಗ್ರಾಮದವರ ಸ್ಮಶಾನಕ್ಕಾಗಿ	1-00
4	ಈಜುಕೊಳ ನಿರ್ಮಾಣಕ್ಕಾಗಿ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಗೆ	1-20
5	ಸರ್ಕಾರಿ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕಾಗಿ	1-00
6	ಬೆಂಗಳೂರು ವಿಶ್ವವಿದ್ಯಾಲಯಕ್ಕಾಗಿ	2-00
7	ವಾಣಿಜ್ಯ ಇಲಾಖೆಗೆ	1-00
	ಒಟ್ಟು	31-27

ಇನ್ನುಳಿದ 5-03 ಎಕರೆ/ಗುಂಟೆ ಜಮೀನಿನ ಪೈಕಿ 3-00 ಎಕರೆ ಜಮೀನನ್ನು ಆಶ್ರಯ ಯೋಜನೆಗಾಗಿ ಮಂಜೂರು ಮಾಡಲಾಗಿದೆ. ಆದರೆ ಸದರಿ ಮಂಜೂರಾತಿಯು ಪಹಣಿಯಲ್ಲಿ ಇಂಡೀಕರಣವಾಗಿರುವುದಿಲ್ಲ. ಮುಂದುವರಿದು, 1-18 ಎಕರೆ/ಗುಂಟೆ ಜಮೀನನ್ನು ಪೌರ

ಕಾರ್ಮಿಕರಿಗೆ ವಸತಿ ಒದಗಿಸುವ ಉದ್ದೇಶಕ್ಕಾಗಿ ಹಾಗೂ 0-05 ಗುಂಟೆ ಜಮೀನನ್ನು ಪತ್ರಕರ್ತರ ಸಂಘದ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡುವ ಪ್ರಸ್ತಾವನೆಗಳು ತಹಶೀಲ್ದಾರ್‌ರವರ ಕಛೇರಿಯಲ್ಲಿ ಪರಿಶೀಲನಾ ಹಂತದಲ್ಲಿ ಬಾಕಿ ಇರುತ್ತವೆ. 0-05 ಗುಂಟೆ ಜಮೀನನ್ನು ರಾಮನಗರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಜಿಲ್ಲಾಧಿಕಾರಿ, ರಾಮನಗರ ಜಿಲ್ಲೆ, ಇವರ ಅಧಿಕೃತ ಜ್ಞಾಪನ ಸಂಖ್ಯೆ:ರಾಜಿಕ/ಎಲ್‌ಎನ್‌ಡಿ(ರಾ)/ಸಿ.ಆರ್/117/2023, ದಿನಾಂಕ:10.01.2024 ರನ್ವಯ ಕಾಯ್ದಿರಿಸಲಾಗಿದೆ. ಉಳಿದಿರುವ 0-15 ಗುಂಟೆ ಜಮೀನಿನ ಪೈಕಿ 0-05 ಗುಂಟೆ ಜಮೀನನ್ನು ರಾಮನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ರವರಿಗೆ ಸಂಘದ ವಿವಿಧ ಉದ್ದೇಶಗಳಿಗಾಗಿ ಮಂಜೂರು ಮಾಡಲು ಪ್ರಸ್ತಾಪಿಸಲಾಗಿದೆ.

ಸದರಿ ಜಮೀನು ನಗರಸಭೆ ವ್ಯಾಪ್ತಿಗೊಳಪಟ್ಟಿದ್ದು ಸಮತಟ್ಟಾದ ಪ್ರದೇಶವಾಗಿದ್ದು ವ್ಯವಸಾಯಕ್ಕೆ ಯೋಗ್ಯವಾಗಿರುವುದಿಲ್ಲ ಮತ್ತು ಸದರಿ ಜಮೀನಿನ ಮೇಲೆ ಯಾವುದೇ ಅಧಿಕ ವಿದ್ಯುತ್ ತಂತಿ ಹಾದು ಹೋಗಿರುವುದಿಲ್ಲ; ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿರುವುದಿಲ್ಲ; ಪ್ರಸ್ತಾಪಿತ ಜಮೀನನ್ನು ಸಕ್ರಮಾತಿ ಕೋರಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಎ, 94ಎ(4), 94(ಬಿ), 94ಸಿ, 94ಸಿಸಿ ಅಡಿ ಯಾವುದೇ ಅರ್ಜಿಗಳು ಸಲ್ಲಿಕೆಯಾಗಿರುವುದಿಲ್ಲ, ಸದರಿ ಜಮೀನು ಎಲ್ಲಾ ಮೂಲಗಳಿಂದ ಮುಕ್ತವಾಗಿರುತ್ತದೆ ಮತ್ತು ರಸ್ತೆ ಸಂಪರ್ಕವನ್ನು ಹೊಂದಿರುತ್ತದೆ.

ಮೇಲ್ಕಂಡ ಮಾಹಿತಿಯೊಂದಿಗೆ ರಾಮನಗರ ಜಿಲ್ಲೆ, ರಾಮನಗರ ತಾಲ್ಲೂಕು, ಕಸಬಾ ಹೋಬಳಿ, ಜಿಗೇನಹಳ್ಳಿ ಗ್ರಾಮದ ಸ.ನಂ.92 ರಲ್ಲಿ 0-05 ಗುಂಟೆ "ಗೋಮಾಳ" ಜಮೀನನ್ನು ಕರ್ನಾಟಕ ಭೂ ಕಂದಾಯ ನಿಯಮಗಳು 1966 ರ ನಿಯಮ 97(4) ರಡಿ ಗೋಮಾಳ ಶೀರ್ಷಿಕೆಯಿಂದ ತಗ್ಗಿಸಿ, ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969 ರ ನಿಯಮ 20(1)(ಸಿ) ರಡಿ ಜಮೀನಿನ ಪ್ರಚಲಿತ ಮಾರುಕಟ್ಟೆ ಮೌಲ್ಯದ ಶೇಕಡ 50 ರಷ್ಟು ಮೌಲ್ಯ ಹಾಗೂ ಇತರೆ ಶುಲ್ಕಗಳನ್ನು ವಿಧಿಸಿ ರಾಮನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ರವರಿಗೆ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅದರಂತೆ, ಜಿಲ್ಲಾಧಿಕಾರಿ ರಾಮನಗರ ಜಿಲ್ಲೆ, ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ. ಆರ್‌ಡಿ 327 ಎಲ್‌ಜಿಬಿ 2023
ಬೆಂಗಳೂರು ದಿನಾಂಕ:05.10.2024

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಹಕಾರ ತತ್ವದಡಿ ಕಾರ್ಯನಿರ್ವಹಿಸುತ್ತಿರುವ ರಾಮನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತದ ಕಾರ್ಯಚಟುವಟಿಕೆಗಳನ್ನು ಪ್ರೋತ್ಸಾಹಿಸುವ ಹಿತ ದೃಷ್ಟಿಯಿಂದ, ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ರಾಮನಗರ ಜಿಲ್ಲೆ, ರಾಮನಗರ ತಾಲ್ಲೂಕು, ಕಸಬಾ ಹೋಬಳಿ, ಜಿಗೇನಹಳ್ಳಿ ಗ್ರಾಮದ ಸ.ನಂ 92 ರಲ್ಲಿ 05 ಗುಂಟೆ (ಐದು ಗುಂಟೆ) "ಗೋಮಾಳ" ಜಮೀನನ್ನು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 97(4) ರನ್ವಯ "ಗೋಮಾಳ" ಶೀರ್ಷಿಕೆಯಿಂದ ತಗ್ಗಿಸಿ, ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 27 ರನ್ವಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ನಿಯಮ 22ಎ(2) ಮತ್ತು ನಿಯಮ 20(1)(ಸಿ) ಅನ್ನು ಸಡಿಲಿಸಿ, ಸದರಿ ಜಮೀನಿಗೆ ಕೃಷಿಯೇತರ (Non-agriculture) ಪ್ರಚಲಿತ ಮಾರ್ಗಸೂಚಿ ಮೌಲ್ಯದ ಶೇಕಡ 10 ರಷ್ಟು ಹಾಗೂ ಇನ್ನಿತರೆ ಶಾಸನಬದ್ಧ ಶುಲ್ಕಗಳನ್ನು ವಿಧಿಸಿ, ರಾಮನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸದರಿ ಜಮೀನನ್ನು ಮಂಜೂರು ಮಾಡಿ ಸರ್ಕಾರವು ಆದೇಶಿಸಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**

ಷರತ್ತುಗಳು:-

1. ಮಂಜೂರಾದ ಜಮೀನು ಯಾವ ಉದ್ದೇಶಕ್ಕೆ ಮಂಜೂರು ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಎರಡು ವರ್ಷಗಳ ಅವಧಿಯೊಳಗೆ ಉಪಯೋಗಿಸತಕ್ಕದ್ದು;
2. ಸಂಸ್ಥೆಗೆ ಸದರಿ ಜಮೀನು ಅವಶ್ಯವಿಲ್ಲವೆಂದು ಕಂಡು ಬಂದಲ್ಲಿ ಕಂದಾಯ ಇಲಾಖೆಗೆ ಹಿಂದಿರುಗಿಸತಕ್ಕದ್ದು;
3. ಮಂಜೂರಾದ ಜಮೀನನ್ನು ವಿನಾಶಕಾರಿಯಾದ ಅಥವಾ ಖಾಯಂ ಆಗಿ ಹಾನಿಕಾರಕವಾಗುವ ರೀತಿಯಲ್ಲಿ ಬಳಸತಕ್ಕದ್ದಲ್ಲ ಹಾಗೂ ಯಾವುದೇ ರೀತಿಯ ಅತಿಕ್ರಮಣವಾಗದಂತೆ ಕ್ರಮವಹಿಸತಕ್ಕದ್ದು;
4. ಮಂಜೂರಾದ ಜಮೀನನ್ನು ಕಂದಾಯ ಇಲಾಖೆಯ ಅನುಮತಿ ಇಲ್ಲದೆ ಮಾರಾಟ ಮಾಡುವುದಾಗಲೀ, ಗುತ್ತಿಗೆ/ಉಪಗುತ್ತಿಗೆ ನೀಡುವುದಾಗಲೀ, ಅಡಮಾನ, ವರ್ಗಾವಣೆ, ದಾನ, ಇತರೆ ಯಾವುದೇ ರೀತಿಯ ಪರಭಾರೆಯನ್ನು ಮಾಡಬಾರದು;
5. ಮಂಜೂರಾದ ಜಮೀನಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಪ್ರಾರಂಭಿಸುವ ಪೂರ್ವದಲ್ಲಿ ಶಾಸನಬದ್ಧವಾಗಿ ಪಡೆಯಬೇಕಾದ ಪರವಾನಗಿಗಳನ್ನು ಸಂಬಂಧಿತ ಪ್ರಾಧಿಕಾರಗಳಿಂದ ಪಡೆಯತಕ್ಕದ್ದು ಹಾಗೂ ನಿಯಾಮಾನುಸಾರ ಪಾವತಿಸಬೇಕಾದ ಎಲ್ಲಾ ರೀತಿಯ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು;
6. ಮಂಜೂರಾತಿ ಜಮೀನಿನ ಮೇಲೆ ಯಾವುದೇ ನ್ಯಾಯಾಲಯದಲ್ಲಿ ದಾವೆ ದಾಖಲಾಗಿದ್ದರೆ ಈ ಮಂಜೂರಾತಿಯು ನ್ಯಾಯಾಲಯದ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ;
7. ಮಂಜೂರಾದ ಜಮೀನಿನ ಯಾವುದೇ ಭಾಗವು ಸಾರ್ವಜನಿಕ ಉದ್ದೇಶಕ್ಕೆ ಅಗತ್ಯವಾಗಿದ್ದಲ್ಲಿ, ಸರ್ಕಾರವು ಸದರಿ ಜಮೀನನ್ನು ಪರಿಹಾರ ನೀಡದೇ ಹಿಂತೆಗೆದುಕೊಳ್ಳುವ ಹಕ್ಕನ್ನು ಹೊಂದಿರುತ್ತದೆ;
8. ಮಂಜೂರಾದ ಜಮೀನು 1969 ರ ಕರ್ನಾಟಕ ಭೂ ಮಂಜೂರಾತಿ ನಿಯಮಗಳಿಗೆ ಬದ್ಧವಾಗಿರತಕ್ಕದ್ದು. ಸದರಿ ನಿಯಮಗಳ ಉಲ್ಲಂಘನೆಯಾದಲ್ಲಿ ಈ ಮಂಜೂರಾತಿ ಆದೇಶ ತನ್ನಷ್ಟಕ್ಕೆ ತಾನೇ ರದ್ದಾಗುವುದು ಹಾಗೂ ಯಾವುದೇ ಪರಿಹಾರ ನೀಡದೇ ಮಂಜೂರಾದ ಭೂಮಿಯನ್ನು ಸರ್ಕಾರದ ವಶಕ್ಕೆ ಪಡೆಯಲಾಗುವುದು;
9. ಮಂಜೂರಾದ ಜಮೀನನ್ನು ಹಸ್ತಾಂತರಿಸುವಾಗ ಜಮೀನಿನ ವಾಸ್ತವ ಪರಿಸ್ಥಿತಿಗಳನ್ನು ಗಮನದಲ್ಲಿರಿಸಿಕೊಂಡು ಜಿಲ್ಲಾಧಿಕಾರಿಗಳು ಪೂರಕವಾದ ಷರತ್ತುಗಳನ್ನು ವಿಧಿಸಬಹುದಾಗಿದೆ;

ಈ ಆದೇಶವನ್ನು ದಿನಾಂಕ:26.09.2024 ರಂದು ಜರುಗಿದ ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ: 554/2024 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(**ಮಹಾಂತಯ್ಯ ಎಸ್ ಹೊಸಮಠ.**)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂಮಂಜೂರಾತಿ-1)

PR-181

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH